ಕರ್ನಾಟಕ ಸರ್ಕಾರ

# ರಾಷ್ಟ್ರೀಯ ಆರೋಗ್ಯ ಅಭಿಯಾನ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಕೊಪ್ಪಳ. (ಪಿನ್: 583231) ದೂ.ಸಂ: 08539-221811

ಸಂಖ್ಯೆ : ಆರ್.ಸಿ.ಹೆಚ್/ಎನ್.ಹೆಚ್.ಎಂ/ಕೊ/20 /2025-26 ದಿನಾಂಕ: 08-04-2025

## ಗುತ್ತಿಗೆ ನೇಮಕಾತಿ ಪ್ರಕಟಣೆ

ಕೊಪ್ಪಳ ಜಿಲ್ಲೆಯಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಚಿಕ್ಕಮಕ್ಕಳ ತಜ್ಞರು, ಶುಶ್ರೂಷಣಾಧಿಕಾರಿಗಳು, ಫಿಸಿಯೋಥೆರಪಿಸ್ಟ್, ಆಡಿಯೋಲಾಜಿಸ್ಟ್/ಸ್ಪೀಚ್‌ಥೇರಪಿಸ್ಟ್, ಕ್ಲಿನಿಕಲ್ ಸೈಕಲಾಜಿಸ್ಟ್ ಆಪ್ಟೋಮೆಟ್ರಿಸ್ಟ್ ಡಿ.ಇ.ಐ.ಸಿ ವ್ಯವಸ್ಥಾಪಕರು, ಆರ್.ಕೆ.ಎಸ್.ಕೆ. ಕೋರ್ಡಿನೇಟರ್ ಜಿಲ್ಲಾ ಎಂ&ಇ ವ್ಯವಸ್ಥಾಪಕರು ಹುದ್ದೆಗಳನ್ನು ಒಂದು ವರ್ಷದವರೆಗೆ ಹಾಗೂ ನವೀಕರಣದ ಷರತ್ತುಗಳನ್ನೊಳಗೊಂಡಂತೆ ಎನ್.ಹೆಚ್.ಎಂ ನಿಯಮಾವಳಿ ಹಾಗೂ ಮೆರಿಟ್ ಆಧಾರದ ಮೇಲೆ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಅಹ್ವಾನಿಸಿದೆ.

ಸದರಿ ಮೇಲ್ಕಾಣಿಸಿದ ಹುದ್ದೆಗಳ ಸಂಖ್ಯೆ, ವಿದ್ಯಾರ್ಹತೆ, ವಯೋಮಿತಿ ಮತ್ತು ಇತರೆ ಮಾಹಿತಿಯನ್ನು ಈ ಕಛೇರಿಯ ಸೂಚನಾ ಫಲಕ ಹಾಗೂ **www.koppal.nic.in** ನಲ್ಲಿ ಪಡೆದುಕೊಂಡು ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಲು ಸೂಚಿಸಿದೆ.

ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: **09-04-2025** ಕೊನೆಯ ದಿನಾಂಕ:**08-05-2025.**

ಉಪಾಧ್ಯಕ್ಷರು
ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ
ಕೊಪ್ಪಳ

ಕರ್ನಾಟಕ ಸರ್ಕಾರ

# ರಾಷ್ಟ್ರೀಯ ಆರೋಗ್ಯ ಅಭಿಯಾನ

## ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಕೊಪ್ಪಳ.

(ಪಿನ್: 583231) ದೂ.ಸಂ: 08539-221811

ಸಂಖ್ಯೆ :ಆರ್.ಸಿ.ಹೆಚ್/ಎನ್‌ಹೆಚ್‌ಎಂ/ಕೊಪ್ಪ/ 2025-26 ದಿನಾಂಕ:09-04-2025

## :: ಗುತ್ತಿಗೆ ನೇಮಕಾತಿ ಅಧಿಸೂಚನೆ ::

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಗುತ್ತಿಗೆ ಆಧಾರದ ಮೇಲೆ ವಿವಿಧ ಹುದ್ದೆಗಳನ್ನು ಒಂದು ವರ್ಷದವರೆಗೆ ಹಾಗೂ ನವೀಕರಣದ ಷರತ್ತುಗಳನ್ನೊಳಗೊಂಡಂತೆ ಎನ್.ಹೆಚ್.ಎಂ ನಿಯಮಾವಳಿ ಹಾಗೂ ಮೆರಿಟ್ ಆಧಾರದ ಮೇಲೆ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಅಹ್ವಾನಿಸಿದೆ.

**ಖಾಲಿ ಇರುವ ಹುದ್ದೆಗಳ ವಿವರ:-**

| ಕ್ರ.ಸಂ | ಖಾಲಿ ಇರುವ ಹುದ್ದೆಗಳ ಹೆಸರು | ಹುದ್ದೆಗಳ ಸಂಖ್ಯೆ | ಮೀಸಲಾತಿ |
|---|---|---|---|
| 1 | ಚಿಕ್ಕ ಮಕ್ಕಳ ತಜ್ಞವೈದ್ಯರು | 01 | ಉಳಿಕೆ ಮೂಲ ವೃಂದ (RPC) |
| 2 | ಶುಶ್ರೂಷಣಾಧಿಕಾರಿಗಳು | 01 | ಉಳಿಕೆ ಮೂಲ ವೃಂದ (RPC) |
| 3 | ಫಿಸಿಯೋ ಥೆರಪಿಸ್ಟ್ | 01 | ಉಳಿಕೆ ಮೂಲ ವೃಂದ (RPC) |
| 4 | ಆಡಿಯೋ ಲಾಜಿಸ್ಟ್/ಸ್ಪೀಚ್ ಥೆರಪಿಸ್ಟ್ | 01 | ಉಳಿಕೆ ಮೂಲ ವೃಂದ (RPC) |
| 5 | ಕ್ಲಿನಿಕಲ್ ಸೈಕಲಾಜಿಸ್ಟ್ | 01 | ಉಳಿಕೆ ಮೂಲ ವೃಂದ (RPC) |
| 6 | ಆಪ್ಟೋಮೆಟ್ರಿಸ್ಟ್ | 01 | ಉಳಿಕೆ ಮೂಲ ವೃಂದ (RPC) |
| 7 | ಡಿ.ಇ.ಐ.ಸಿ ಮ್ಯಾನೇಜರ್ | 01 | ಉಳಿಕೆ ಮೂಲ ವೃಂದ (RPC) |
| 8 | ಆರ್.ಕೆ.ಎಸ್.ಕೆ ಕೋರ್ಡಿನೇಟರ್ | 01 | ಉಳಿಕೆ ಮೂಲ ವೃಂದ (RPC) |
| 9 | ಜಿಲ್ಲಾ ಎಂ & ಇ ವ್ಯವಸ್ಥಾಪಕರು | 01 | ಉಳಿಕೆ ಮೂಲ ವೃಂದ (RPC) |

**ಶೈಕ್ಷಣಿಕ ವಿದ್ಯಾರ್ಹತೆ ಮತ್ತು ಹುದ್ದೆಗಳ ವರ್ಗೀಕರಣ:**

ಚಿಕ್ಕ ಮಕ್ಕಳ ತಜ್ಞವೈದ್ಯರು: 01

**Essential:** MBBS with PG Degree in Paediatrics recognized by Medical council of India
**Preference:** Minimum 2 Years work experience in Public Health Sector (Govt. or NGO)
Salary Per month:1,30,000/-

ಶುಶ್ರೂಷಣಾಧಿಕಾರಿಗಳು: 01

**Essential:** Should have completed BSc Nursing in Karnataka State Government Approved Institution.
**Preference:** Minimum 2 Years work experience in Public Health Sector (Govt. or NGO)
Salary Per month:15555/-

ಫಿಸಿಯೋಥೆರಪಿಸ್ಟ್: 01

**Essential:** Bachelor's Degree in Physiotherapy recognized from Physiotherapy Council of India.
**Preference:** Minimum 2 Years work experience in Public Health Sector (Govt. or NGO)
Salary Per month:25000/-

ಆಡಿಯಾಲಜಿಸ್ಟ್/ಸ್ಪೀಚ್ ಥೆರಪಿಸ್ಟ್: 01

**Essential:** Bachelor's Degree in Speech and Pathology from RCI (Rehabilitation Council of India) recognized Institute.
**Preference:** Minimum 2 Years work experience in Public Health Sector (Govt. or NGO)
Salary Per month:25000/-

ಕ್ಲಿನಿಕಲ್ ಸೈಕಲಾಜಿಸ್ಟ್: 01

**Essential:** Master's Degree in Child Psychology from RCI (Rehabilitation Council of India) recognized Institute.
**Preference:** Minimum 2 Years work experience in Public Health Sector (Govt. or NGO)
Salary Per month:25000/-

ಆಪ್ಟೋಮೆಟ್ರಿಸ್ಟ್ :

**Essential:** Bachelor's in Optometry OR Master in in Optometry from Any recognized university.
**Preference:** Minimum 2 Years work experience in Public Health Sector (Govt. or NGO)
Salary Per month:15397/-

ಡಿ.ಇ.ಐ.ಸಿ ವ್ಯವಸ್ಥಾಪಕರು (**DEIC Manager**):–

ಅಭ್ಯರ್ಥಿಯು Masters in Disability Rehabilitation Administration (MDRA) approved by Rehabilitation Council of India (RCI) / OR A post graduate degree/ Diploma in Hospital/Health Management from a Recognized/Reputed institution with 1 year relevant experience for Diploma holders

OR

An MBA Hospital Management/ Administration degree from a recognized Institution with 2 year experience in hospital/Health programme.

***In case of no application with the above mentioned qualifications is received for the post then consider MBA in Human Resource with work experience In National Health Mission or Health Sector.***
Salary Per month:15000/-

ಆರ್.ಕೆ.ಎಸ್.ಕೆ. ಕೋರ್ಡಿನೇಟರ್:

| **Qualification:** | **Experience** |
|---|---|
| Any Degree with Master in Public Health (MPH) | Minimum 1 year experience in relevant programmes (Govt./NGO Preference should be given to persons with experience in Adolescent Health /RMNCH Programme |
| OR | |
| Master In Social Work (MSW) | Minimum 3 year experience in relevant programmes (Govt./NGO Preference should be given to persons with experience in Adolescent Health /RMNCH Programme |
| OR | |
| MBA/Post Graduate Diploma in Health Management (PGDHM) Should be of minimum 2 Years regular course. | Minimum 3 year experience in relevant programmes (Govt./NGO) Preference should be given to persons with Hospital administration /Health Administration experience in Adolescent Health /RMNCH Programme |

Salary Per month:20000/-

ಜಿಲ್ಲಾ ಎಂ&ಇ ವ್ಯವಸ್ಥಾಪಕರು:

Master Degree in Statistics/Demography/Mathematics/Economics with statistics as a subject and having Computer knowledge.

**Experience:** 1year experience in the field of Data management and analysis and HMIS/RCH programme working in Health sector.

**Salary PM:- 30,000/-**

ಅರ್ಜಿ ಸಲ್ಲಿಸುವ ವಿಧಾನ: ಪ್ರಾಧಿಕಾರದ ವೆಬ್‌ಸೈಟ್ http://www.koppal.nic.in ನಲ್ಲಿ ತೋರಿಸುವ ಲಿಂಕ್ ಅನ್ನು ಆಯ್ಕೆ ಮಾಡಿ ಆನ್ ಲೈನ್ ಮುಖಾಂತರ ಅರ್ಜಿಯನ್ನು ಭರ್ತಿ ಮಾಡಬೇಕು. ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ:09-04-2025 ರಿಂದ ದಿನಾಂಕ:08-05-2025 ಸಂಜೆ 5.30ರವರೆಗೆ. ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಭರ್ತಿ ಮಾಡುವ ಮೊದಲು, ಅರ್ಹತೆಗೆ ಸಂಬಂಧಿಸಿದ ಎಲ್ಲಾ ಸೂಚನೆಗಳನ್ನು ಓದಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

**1-ಸಾಮಾನ್ಯ ಸೂಚನೆಗಳು:**

- ಎನ್.ಹೆಚ್.ಎಂ ಯೋಜನೆಯಡಿಯಲ್ಲಿ ಖಾಲಿ ಇರುವ ಈ ಮೇಲಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಂಬಂಧ ನೇಮಕಾತಿ ಪ್ರಕ್ರಿಯೆಯ ಪೂರ್ಣ ವಿವರವನ್ನು www.koppal.nic.in ಈ ಜಾಲತಾಣದಲ್ಲಿ ಲಭ್ಯವಿದ್ದು ಅಭ್ಯರ್ಥಿಗಳು ಕಡ್ಡಾಯವಾಗಿ ಆನ್‌ಲೈನ್ ಮೂಲಕ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.
- ಅಭ್ಯರ್ಥಿಗಳು ಭಾರತೀಯ ನಾಗರಿಕನಾಗಿರತಕ್ಕದ್ದು.
- ನೇಮಕಾತಿ ಅರ್ಜಿಗಳನ್ನು ಖುದ್ದಾಗಿ/ಅಂಚೆ/ಕೋರಿಯರ್ ಮೂಲಕ ಸಲ್ಲಿಸಲು ಅವಕಾಶವಿರುವುದಿಲ್ಲ. ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಅಭ್ಯರ್ಥಿಗಳು ಎಲ್ಲಾ ದಾಖಲೆಗಳನ್ನು ಸ್ಪಷ್ಟವಾಗಿ ಕಾಣುವಂತೆ ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ, ಆನ್‌ಲೈನ್ ಮೂಲಕ ಸಲ್ಲಿಸುವ ಅರ್ಜಿಗಳಲ್ಲಿ ಅಪೂರ್ಣ ಹಾಗೂ ಅಸ್ಪಷ್ಟ ದಾಖಲೆಗಳನ್ನು ಅಥವಾ ಮಾಹಿತಿಗಳನ್ನು ನೀಡಿದ್ದಲ್ಲಿ, ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಈ ನೇಮಕಾತಿ ಸಂಬಂಧ ಅಭ್ಯರ್ಥಿಗಳು ಕೇಳುವ ಸ್ಪಷ್ಟೀಕರಣ, ಪ್ರಶ್ನೋತ್ತರಗಳು, ತಕರಾರು ಇತ್ಯಾದಿಗಳಿಗೆ ಪತ್ರ/ಇ-ಮೇಲ್ ವ್ಯವಹಾರಗಳಿಗೆ ಯಾವುದೇ ಅವಕಾಶವಿರುವುದಿಲ್ಲ.

  ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ:**-09-04-2025**
  ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:**-08-05-2025**
- ನೇಮಕಾತಿ ಪ್ರಕಟಣೆಯಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ನಿಗದಿಪಡಿಸಿದ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರಲೇಬೇಕು. ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊರತುಪಡಿಸಿ, ಇತರೆ ಯಾವುದೇ ಸಮಾನಾಂತರ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ.
- ಕನ್ನಡ ಭಾಷಾ ಜ್ಞಾನ ಓದುವುದು, ಬರೆಯುವುದು ಮತ್ತು ಮಾತನಾಡುವುದು ಕಡ್ಡಾಯವಾಗಿರುತ್ತದೆ.
- ಅರ್ಜಿಯಲ್ಲಿ ನಮೂದಿಸಿದ ಅಂಕಪಟ್ಟಿ/ಇತರ ದಾಖಲಾತಿಗಳಲ್ಲಿ ಯಾವುದೇ ವ್ಯತ್ಯಾಸ ಕಂಡುಬಂದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ, ಈ ನೇಮಕಾತಿ ಪ್ರಕಟಣೆಯನ್ನು ಯಾವುದೇ ಕಾರಣ ನೀಡದೆ ಯಾವುದೇ ಹಂತದಲ್ಲಿ ಹಿಂದಕ್ಕೆ ಪಡೆಯುವ / ರದ್ದುಪಡಿಸುವ ಅಧಿಕಾರವನ್ನು ಜಿಲ್ಲಾ ಆರೋಗ್ಯ

ಮತ್ತು ಕುಟುಂಬ ಕಲ್ಯಾಣ ಸಂಘ ಕೊಪ್ಪಳ ಹೊಂದಿರುತ್ತದೆ. ಅಭ್ಯರ್ಥಿಗಳು ಆಯ್ಕೆಯಾದ ನಂತರ ಸಲ್ಲಿಸಿರುವ ದಾಖಲಾತಿಗಳ ನೈಜತೆಯನ್ನು ಸಂಬಂಧಪಟ್ಟ ಸಂಸ್ಥೆ/ಪ್ರಾಧಿಕಾರ /ವಿಶ್ವವಿದ್ಯಾಲಯಗಳಿಂದ ದೃಢೀಕರಿಸಿಕೊಳ್ಳುವ ಹಕ್ಕನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘವು ಕಾಯ್ದಿರಿಸಿಕೊಂಡಿದೆ.

- ಅನುಭವ ಅಗತ್ಯವಿರುವ ಹುದ್ದೆಗಳಿಗೆ ಅಗತ್ಯ ವಿದ್ಯಾರ್ಹತೆಯನ್ನು ಪಡೆದ ನಂತರ ಹೊಂದಿರುವ ಆಯಾ ಕ್ಷೇತ್ರ/ ಹುದ್ದೆಗೆ ಸಂಬಂಧಪಟ್ಟ ನಿರ್ಧಿಷ್ಟ ಅನುಭವವನ್ನು ಮಾತ್ರ ಪರಿಗಣಿಸಲಾಗುವುದು. ಸೇವಾನುಭವ ದೃಢೀಕರಣ ಪತ್ರವನ್ನು ಸಲ್ಲಿಸುವವರು ಉದ್ಯೋಗದಾತರಿಂದ ಪಡೆದ ಸೇವಾ ದೃಢೀಕರಣ ಪತ್ರವನ್ನು ಕಡ್ಡಾಯವಾಗಿ ONLINE ನಲ್ಲಿ ಅಪ್‌ಲೋಡ್ ಮಾಡುವುದು ಹಾಗೂ ಮೂಲ ದಾಖಲಾತಿಗಳ ಪರಿಶೀಲನೆ ವೇಳೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
- ಅಭ್ಯರ್ಥಿಗಳು On-Line ಮೂಲಕ ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳ ಪ್ರತಿಯನ್ನು ಅಪ್‌ಲೋಡ್ ಜಜಜಜಜಜಜಜಜಜಮಾಡತಕ್ಕದ್ದು, ಮೂಲ ದಾಖಲಾತಿಗೆ ಹಾಜರಾಗುವ ಅರ್ಹ ಅಭ್ಯರ್ಥಿಗಳು ತಾವು ಸಲ್ಲಿಸಿದ ಎಲ್ಲಾ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು.
- ಹುದ್ದೆಗಳನ್ನು ಹೆಚ್ಚು ಅಥವಾ ಕಡಿಮೆ ಮಾಡುವ ಷರತ್ತಿಗೊಳಪಟ್ಟಿರುತ್ತದೆ. ಹುದ್ದೆಗಳನ್ನು ಹೆಚ್ಚು ಅಥವಾ ಕಡಿಮೆ ಮಾಡುವ ಅಧಿಕಾರವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದಲ್ಲಿ ಕಾಯ್ದಿರಿಸಲಾಗಿದೆ ಹಾಗೂ ಯಾವುದೇ ಕಾರಣ ನೀಡದೇ ಹುದ್ದೆಗಳನ್ನು ರದ್ದುಗೊಳಿಸುವ ಷರತ್ತಿಗೊಳಪಟ್ಟಿರುತ್ತದೆ.

**2. ವಯೋಮಿತಿ:**

ನೇಮಕಾತಿ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ:08-05-2025ಕ್ಕೆ ನಿಗದಿಪಡಿಸಲಾಗಿದ್ದು, ಈ ದಿನಾಂಕಕ್ಕೆ ಅಭ್ಯರ್ಥಿಗಳ ಗರಿಷ್ಠ ವಯೋಮಿತಿ ಈ ಕೆಳಕಂಡಂತೆ ಇರತಕ್ಕದ್ದು.

| ಕ್ರ.ಸಂ | ಹುದ್ದೆ | ಗರಿಷ್ಠ ವಯೋಮಿತಿ |
|---|---|---|
| 1 | ಚಿಕ್ಕ ಮಕ್ಕಳ ತಜ್ಞವೈದ್ಯರು | 65 |
| 2 | ಶುಶ್ರೂಷಣಾಧಿಕಾರಿಗಳು | 45 |
| 3 | ಫಿಸಿಯೋ ಥೆರಪಿಸ್ಟ್ | 45 |
| 4 | ಆಡಿಯೋ ಲಾಜಿಸ್ಟ್/ಸ್ಪೀಚ್‌ಥೆರಪಿಸ್ಟ್ | 45 |
| 5 | ಕ್ಲಿನಿಕಲ್ ಸೈಕಲಾಜಿಸ್ಟ್ | 45 |
| 6 | ಆಪ್ಟೋಮೆಟ್ರಿಸ್ಟ್ | 45 |
| 7 | ಡಿ.ಇ.ಐ.ಸಿ ಮ್ಯಾನೇಜರ್ | 45 |
| 8 | ಆರ್.ಕೆ.ಎಸ್.ಕೆ ಕೋರ್ಡಿನೇಟರ್ | 45 |
| 9 | ಜಿಲ್ಲಾ ಎಂ & ಇ ವ್ಯವಸ್ಥಾಪಕರು | 40 |

**<u>ಅಭ್ಯರ್ಥಿಯ ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಮೂಲ ಪ್ರಮಾಣ ಪತ್ರಗಳು: ಈ ಕೆಳಕಂಡಂತೆ ಇರುತ್ತವೆ.</u>**

1. ವಿವಿಧ ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ/ಎಲ್ಲಾ ಸೆಮಿಸ್ಟರ್‌ಗಳ/ವರ್ಷಗಳ ಪ್ರಮಾಣ ಪತ್ರಗಳು ಅಥವಾ ಅಂಕಪಟ್ಟಿಗಳು. (ಇಂಟರ್ನ್‌ಶಿಫ್ ಅಂಕಗಳನ್ನು ಪರಿಗಣಿಸುವುದಿಲ್ಲ.)

2. ಸಂಬಂಧಿಸಿದ ಪ್ರಾಧಿಕಾರದಲ್ಲಿ ನೊಂದಣೆ ಮಾಡಿಸಿದ ಪ್ರಮಾಣ ಪತ್ರಗಳನ್ನು ಹಾಜರುಪಡಿಸಬೇಕು.
3. **ಜನ್ಮ ದಿನಾಂಕವನ್ನು ಪರಿಗಣಿಸಲು ಎಸ್.ಎಸ್.ಎಲ್.ಸಿ ಅಂಕಪಟ್ಟಿಯನ್ನು ಅಪ್‌ಲೋಡ್ ಮಾಡತಕ್ಕದ್ದು.**
4. ಅನುಭವ/ನಿರಾಕ್ಷೇಪಣಾ ಪ್ರಮಾಣ ಪತ್ರಗಳು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘವು ನಿಗದಿಪಡಿಸಿದ ಸ್ಥಳದಲ್ಲಿ ದಾಖಲಾತಿಗಳ ಪರಿಶೀಲನೆಗೆ ಅಭ್ಯರ್ಥಿಗಳು ಅವರ ಸ್ವಂತ ಖರ್ಚಿನಲ್ಲಿ ಹಾಜರಾಗುವುದು, ಅಭ್ಯರ್ಥಿಗಳು ಅಪ್‌ಲೋಡ್ ಮಾಡಿದ ದಾಖಲೆಗಳನ್ನು ಮಾತ್ರ ಪರಿಶೀಲನೆ ಮಾಡಲಾಗುವುದು. ದಾಖಲೆಗಳನ್ನು ಪರಿಶೀಲನೆ ಮಾಡುವ ದಿನಾಂಕವನ್ನು **www.koppal.nic.in** ತಿಳಿಸಲಾಗುವುದು. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ನೇಮಕಾತಿ ಪ್ರಾಧಿಕಾರದ ನಿರ್ಣಯವೇ ಅಂತಿಮವಾಗಿರುತ್ತದೆ.

<u>ಪಾಸ್ ಪೋರ್ಟ್ ಭಾವಚಿತ್ರ ಮತ್ತು ಸಹಿ ಕುರಿತು:</u>
ಭಾವಚಿತ್ರ 100ಕೆ.ಬಿ ಗಿಂತ ಕಡಿಮೆ ಗಾತ್ರ ಇರುವ ಪಾಸ್‌ಪೋರ್ಟ್ ಭಾವ ಚಿತ್ರ ಅಪ್‌ಲೋಡ್ ಮಾಡತಕ್ಕದ್ದು ಮತ್ತು 50 ಕೆ.ಬಿ ಗಿಂತ ಕಡಿಮೆ ಗಾತ್ರವಿರುವ ಮಾದರಿ ಸಹಿಯ ಚಿತ್ರವನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡತಕ್ಕದ್ದು. ಒಂದು ವೇಳೆ ಅಭ್ಯರ್ಥಿಯು ತಮ್ಮ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡದಿದ್ದರೆ ಅವರ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
ಅಭ್ಯರ್ಥಿಯು ಸಂಬಂಧಪಟ್ಟ ವಿದ್ಯಾರ್ಹತೆ, ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದ ನೊಂದಣಿ ಪ್ರಮಾಣ ಪತ್ರ, ಸ್ಕ್ಯಾನ್ ಮಾಡಿ Upload ಮಾಡತಕ್ಕದ್ದು.

**ಅಭ್ಯರ್ಥಿಗಳು** On-Line **ಮೂಲಕ ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ** ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳ **ಪ್ರತಿಗಳನ್ನು ಅಪ್‌ಲೋಡ್ ಮಾಡತಕ್ಕದ್ದು.** ಪ್ರಮಾಣ ಪತ್ರಗಳನ್ನು/ದಾಖಲಾತಿಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ **ಕೊನೆಯ ದಿನಾಂಕದೊಳಗೆ** ಅಂದರೆ **ದಿನಾಂಕ:08-05-2025ರೊಳಗೆ** ಪಡೆದಿರಬೇಕು. ಇಲ್ಲವೇ ಸಿಂಧುವಾಗಿರಬೇಕು ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ **ಸಂಘವು** ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ **ಅರ್ಜಿಯಲ್ಲಿ ನಮೂದಿಸಿರುವ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.**

<u>ಪ್ರಮುಖ ಸೂಚನೆಗಳು:-</u>

1. ಅಭ್ಯರ್ಥಿಗಳು Online ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಅವರುಗಳು ಮೂಲ ದಾಖಲಾತಿಗೆ ಅರ್ಹರೆ ಎಂಬುದನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ ಪರಿಶೀಲಿಸಿ ಮೇಲು ನೋಟಕ್ಕೆ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಮೂಲದಾಖಲಾತಿ ಪರಿಶೀಲನೆಗೆ ಕರೆಯಲಾಗುವುದು. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ ಪ್ರಮಾಣ ಪತ್ರ, ಅನುಭವ, ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.
2. ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ, ಅನರ್ಹರೆಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತನವನ್ನು ರದ್ದುಪಡಿಸುವ ಹಕ್ಕು ಸಂಘಕ್ಕೆ ಇರುತ್ತದೆ.
3. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಜನ್ಮ ದಿನಾಂಕ, ವಿದ್ಯಾರ್ಹತೆ, ಹಾಗೂ ಅನುಭವ, ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಆನಂತರದಲ್ಲಿ, ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.
4. ಅಭ್ಯರ್ಥಿಗಳು ಎಲ್ಲಾ ವರ್ಷಗಳ/ಸೆಮಿಸ್ಟರ್‌ಗಳ ಅಂಕಪಟ್ಟಿಗಳು, ನೊಂದಣಿ ಪ್ರಮಾಣ ಪತ್ರ, ಅನುಭವ, ವಯೋಮಿತಿ ಮುಂತಾದ ಅವಶ್ಯಕ ದಾಖಲೆಗಳ ಪ್ರತಿಗಳನ್ನು ಆನ್-ಲೈನ್‌ನಲ್ಲಿ ಅಪ್‌ಲೋಡ್

ಮಾಡುವುದು ಕಡ್ಡಾಯವಾಗಿರುತ್ತದೆ. ಅಸ್ಪಷ್ಟ, ಅಪೂರ್ಣ, ಭಾವಚಿತ್ರ ಇಲ್ಲದ ಮತ್ತು ಅಭ್ಯರ್ಥಿಯು ಸಹಿ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

5. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.
6. ಅಭ್ಯರ್ಥಿಗಳು ಅರ್ಜಿಗಳನ್ನು Online ಮೂಲಕ Upload ಮಾಡಿದ ನಂತರ ಸ್ಪಷ್ಟವಾಗಿ ಹಾಗೂ ನಿರ್ದಿಷ್ಟ ಗಾತ್ರದಲ್ಲಿ Upload ಮಾಡಿರುವ ಬಗ್ಗೆ ಖಚಿತ ಪಡಿಸಿಕೊಳ್ಳುವುದು.
7. ಇತ್ತೀಚಿನ ಎನ್.ಹೆಚ್.ಎಂ ಮಾರ್ಗಸೂಚಿಯನ್ವಯ ನೇಮಕಾತಿಯನ್ನು ಮಾಡಿಕೊಳ್ಳಲಾಗುವುದು ಹಾಗೂ ಎನ್.ಹೆಚ್.ಎಂ ಮಾರ್ಗಸೂಚಿಯನ್ವಯ ವೇತನವನ್ನು ಪಾವತಿಸಲಾಗುವುದು.
8. ನೇಮಕಾತಿ ಅಧಿಸೂಚನೆ ಹೊರಡಿಸಿದ ಒಂದು ವರ್ಷದ ಒಳಗೆ ಹುದ್ದೆಗಳು ಯಾವುದೇ ಸಮಯದಲ್ಲಿ ತೆರವಾದಲ್ಲಿ ಇದೇ ನೇಮಕಾತಿಯ ಕಾಯ್ದಿರಿಸಿದ ಪಟ್ಟಿಯಲ್ಲಿನ ಅಭ್ಯರ್ಥಿಗಳನ್ನೇ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವದು.

**ವಿಶೇಷ ಸೂಚನೆ:** ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮೊದಲು ಎಲ್ಲಾ ವಿವರಗಳನ್ನು ಓದಿ ಅರ್ಥೈಸಿಕೊಂಡು ಅನಂತರವೇ ತಮಗೆ ಅನ್ವಯವಾಗುವ ವಿವರಗಳನ್ನು ಭರ್ತಿ ಮಾಡತಕ್ಕದ್ದು. ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿ ವಿವರಗಳನ್ನು ತಿದ್ದುಪಡಿ/ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿಗಳನ್ನು ತಿರಸ್ಕರಿಸಲಾಗುವುದು. ಅಭ್ಯರ್ಥಿಗಳು ವಯೋಮಿತಿ, ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಹಾಗೂ ಅರ್ಜಿಯಲ್ಲಿ ಕೋರಿರುವ ಎಲ್ಲಾ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಸ್ಪಷ್ಟವಾದ ದಾಖಲೆಗಳನ್ನು ಅಪ್‌ಲೋಡ್ ಮಾಡತಕ್ಕದ್ದು. ಅಭ್ಯರ್ಥಿಗಳು ಅಪ್‌ಲೋಡ್ ಮಾಡುವ ದಾಖಲೆಗಳನ್ನು ಮಾತ್ರ ಪರಿಶೀಲನೆ ಮಾಡಲಾಗುವುದು. ತದ ನಂತರದಲ್ಲಿ ಮನವಿ ಮುಖಾಂತರ ಯಾವುದೇ ದಾಖಲೆಗಳನ್ನು ಸಲ್ಲಿಸಿದ್ದಲ್ಲಿ ಪರಿಗಣಿಸಲಾಗುವುದಿಲ್ಲ.

ಉಪಾಧ್ಯಕ್ಷರು
ಜಿಲ್ಲಾ ಆರೋಗ್ಯ ಮತ್ತು ಕುಟುಂಬ
ಕಲ್ಯಾಣ ಸಂಘ, ಕೊಪ್ಪಳ